# ದಿನಾಂಕ : 07-08-2021 ರಂದು ಬೆಳಗ್ಗೆ 11:00 ಗಂಟೆಗೆ ವಾರ್ಡ್-113ರ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

ವಾರ್ಡ್ ಸಂಖ್ಯೆ-113 ಕೋನೇನ ಅಗ್ರಹಾರ ವಾರ್ಡ್ ಕಛೇರಿಯಲ್ಲಿ ದಿನಾಂಕ : 07-08-2021 ರಂದು ಬೆಳಿಗ್ಗೆ 11:00 ಗಂಟೆಗೆ ಮಾನ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರು ನಿಯೋಜಿಸಿರುವ ವಾರ್ಡ್‌ನ ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ, ವಾರ್ಡ್ ಸಮಿತಿ ಸಭೆಯನ್ನು ಕರೆಯಲಾಗಿದ್ದು, ಈ ಕೆಳಕಂಡಂತೆ ಸದಸ್ಯರು ಸಭೆಯಲ್ಲಿ ಭಾಗವಹಿಸಿರುತ್ತಾರೆ.

## ಸಭೆಗೆ ಹಾಜರಿದ್ದ ಸದಸ್ಯರು ಹಾಗೂ ಅಧಿಕಾರಿಗಳು

1. ಶ್ರೀ.ಎಂ.ಜಿ.ಹೆಗ್ಡೆ – ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು, ವಾರ್ಡ್-113.
2. ಶ್ರೀ.ವಿ.ಸಾಮಂದಯ್ಯ – ಸಹಾಯಕ ಅಭಿಯಂತರರು ಹಾಗೂ ಸದಸ್ಯ ಕಾರ್ಯದರ್ಶಿ.
3. ಶ್ರೀ.ಮಂಜುನಾಥ್.ಎನ್ – ಎ.ಇ, ಬೆಸ್ಕಾಂ
4. ಶ್ರೀಮತಿ.ಕುಸುಮಾ.ಬಿ.ಎನ್ – ಎ.ಇ, ಬೆಸ್ಕಾಂ
5. ಶ್ರೀ.ಧನ್ವಂತ್ – ಎ.ಇ.ಇ ಬಿಡಬ್ಲ್ಯೂಎಸ್‌ಎಸ್‌ಬಿ
6. ಶ್ರೀ.ರಾಮಸ್ವಾಮಿ – ಸದಸ್ಯರು
7. ಶ್ರೀ.ಉಶಾ ಶಂಕರ್ – ಸದಸ್ಯರು
8. ಶ್ರೀ.ಕೆ.ಎಂ.ನಾಗರಾಜ – ಸದಸ್ಯರು
9. ಶ್ರೀ.ಆರ್.ವಿಜಯಕುಮಾರ್ – ಸದಸ್ಯರು
10. ಶ್ರೀ.ಎಸ್.ಜೈಯ್‌ಕುಮಾರ್ – ಸದಸ್ಯರು
11. ಶ್ರೀ.ಪಿ.ಎಂ.ಏಕಾಂಬರೇಶ್ ರೆಡ್ಡಿ – ಸದಸ್ಯರು
12. ಶ್ರೀ.ಮುರಳಿ ಮೋಹನ್ – ಸದಸ್ಯರು
13. ಶ್ರೀ.ಎಸ್.ಪದ್ಮನಾಭ – ಸದಸ್ಯರು
14. ಶ್ರೀ.ಮಹಮದ್ ಶರೀಫ್ – ಸದಸ್ಯರು
15. ಶ್ರೀ.ಕೆ.ಫಯಾಜ್ ಅಹ್ಮದ್ – ಸದಸ್ಯರು

ಪ್ರಥಮವಾಗಿ ಅಧ್ಯಕ್ಷರು ಸಭೆಯನ್ನು ಉದ್ದೇಶಿಸಿ ಹಿಂದಿನ ಸಭೆಯ ನಡವಳಿಗಳ ಬಗ್ಗೆ ಮಾತನಾಡಿದರು. ನಂತರ ಕಾರ್ಯದರ್ಶಿಗಳು ಹಾಗೂ ಸಂಚಾಲಕರು ಆದ ಶ್ರೀ.ವಿ.ಸಾಮಂದಯ್ಯರವರು ಸಭೆಗೆ ಆಗಮಿಸಿದ್ದ ಎಲ್ಲಾ ಅಧಿಕಾರಿಗಳು, ಸದಸ್ಯರು ಮತ್ತು ಸಾರ್ವಜನಿಕರನ್ನು ಸಭೆಗೆ ಸ್ವಾಗತಿಸಿದರು. ನಂತರದಲ್ಲಿ ಹಿಂದಿನ ಸಭೆಯ ನಡವಳಿಗಳನ್ನು ಓದಿ ತಿಳಿಸಲಾಯಿತು ಹಾಗೂ ಇಂದಿನ ಸಭೆಯ ಅಜೆಂಡಾ ಹಾಗೂ ಸಾರ್ವಜನಿಕರ ಕುಂದುಕೊರತೆಗಳ ಬಗ್ಗೆ ಸಭೆಗೆ ಮಾಹಿತಿ ನೀಡುವಂತೆ ಕೋರಿದ್ದರು.

- ನೋಡಲ್ ಅಧಿಕಾರಿಯವರು ಸಭೆಯನ್ನು ಉದ್ದೇಶಿಸಿ ಮಾತನಾಡಿದರು, ನಂತರ 2021-22ನೇ ಸಾಲಿನ ಕಾಮಗಾರಿಗಳ ಕ್ರಿಯಾ ಯೋಜನೆ ಬಗ್ಗೆ ವಿವರವಾಗಿ ಸಭೆಗೆ ತಿಳಿಸಿದರು.

- ಶ್ರೀ.ಮಹಮದ್ ಶರೀಫ್ ರವರು ಮಾತನಾಡಿ, ಎಸ್.ಆರ್.ಬಡಾವಣೆಯಲ್ಲಿ ನೀರಿಗೆ ತುಂಬಾ ತೊಂದರೆ ಇರುವುದರಿಂದ ಕೊಳವೆ ಭಾವಿಯನ್ನು ಕೊರೆಸಲು ಸಭೆಗೆ ತಿಳಿಸಿದರು, ಇದಕ್ಕೆ ಸಹಾಯಕ ಅಭಿಯಂತರರು ಸ್ಪಂದಿಸಿ, ಕೂಡಲೇ ಸೂಕ್ತ ಕ್ರಮ ಕೈಗೊಳ್ಳುವುದಾಗಿ ಸಭೆಗೆ ತಿಳಿಸಿದರು.

➢ ನೋಡಲ್ ಅಧಿಕಾರಿಯವರು ಮಾತನಾಡಿ ವಾರ್ಡ್‌ನಲ್ಲಿ ಕಟ್ಟಡಗಳು ಕಟ್ಟುತ್ತಿದ್ದು, ಕಟ್ಟಡಗಳ ಮುಂಭಾಗದಲ್ಲಿ ಕಟ್ಟಡದ ಸಾಮಾಗ್ರಿಗಳನ್ನು ರಸ್ತೆಯಲ್ಲಿ ಹಾಕಿಕೊಂಡಿರುತ್ತಾರೆ. ಇದರಿಂದ ಸಾರ್ವಜನಿಕರಿಗೆ ಓಡಾಡಲು ತೊಂದರೆಯುಂಟಾಗುವ ಸಂಭವವಿರುತ್ತದೆ. ಆದ್ದರಿಂದ ಕಟ್ಟಡ ಸಾಮಗ್ರಿಗಳನ್ನು ತೆಗೆಸುವಂತೆ ವಾರ್ಡ್ ಸಹಾಯಕ ಅಭಿಯಂತರರಿಗೆ ತಿಳಿಸಿದರು. ಇದಕ್ಕೆ ಸಹಾಯಕ ಅಭಿಯಂತರರು ಕ್ರಮ ವಹಿಸುವುದಾಗಿ ಸಭೆಗೆ ತಿಳಿಸಿದರು.

➢ ಶ್ರೀ.ನಾಗರಾಜ ರೆಡ್ಡಿ ರವರು ಮಾತನಾಡಿ ಸಿಂಡಿಕೇಟ್ ಬ್ಯಾಂಕ್ ರಸ್ತೆಯಲ್ಲಿ ಅರುಣಾ ಅಪಾರ್ಟ್‌ಮೆಂಟ್‌ಯಿದ್ದು, ಇಲ್ಲಿ ಮ್ಯಾನ್‌ಹೋಲ್‌ನಿಂದ ನೀರು ಹೊರ ಬರುತ್ತಿದ್ದು, ಇದನ್ನು ಸರಿಪಡಿಸುವಂತೆ ಸಭೆಗೆ ತಿಳಿಸಿದರು, ಇದಕ್ಕೆ ಬಿ.ಡಬ್ಲ್ಯೂ.ಎಸ್.ಎಸ್.ಬಿ ಸಹಾಯಕ ಅಭಿಯಂತರರು ಕ್ರಮ ವಹಿಸುವುದಾಗಿ ಸಭೆಗೆ ತಿಳಿಸಿದರು.

➢ ಶ್ರೀ.ಚಂದ್ರಪ್ಪ ರೆಡ್ಡಿ ರವರು ಮಾತನಾಡಿ ವಾರ್ಡ್‌ನಲ್ಲಿ ಅಲ್ಲಲ್ಲಿ ಡೆಬ್ರೀಸ್(ಅನುಪಯುಕ್ತ ಮಣ್ಣು) ಇದ್ದು, ಇದನ್ನು ತೆರವುಗೊಳಿಸುವಂತೆ ಸಭೆಗೆ ತಿಳಿಸಿದರು. ಸಂಬಂಧಪಟ್ಟ ಸಹಾಯಕ ಅಭಿಯಂತರರು ಕ್ರಮ ವಹಿಸುವುದಾಗಿ ಸಭೆಗೆ ತಿಳಿಸಿದರು.

➢ ಶ್ರೀ.ಚಂದ್ರಪ್ಪ ರೆಡ್ಡಿ ರವರು ಮಾತನಾಡಿ ಹಳೆ ವಿಮಾನ ನಿಲ್ದಾಣ ರಸ್ತೆಯಲ್ಲಿ ರಸ್ತೆ ಗುಂಡಿಯಿದ್ದು, ಸದರಿ ರಸ್ತೆ ಗುಂಡಿ ಮುಚ್ಚುವಂತೆ ಸಭೆಗೆ ತಿಳಿಸಿದರು. ಸಂಬಂಧಪಟ್ಟ ಸಹಾಯಕ ಅಭಿಯಂತರರು ಕೂಡಲೇ ಕ್ರಮ ವಹಿಸುವುದಾಗಿ ಸಭೆಗೆ ತಿಳಿಸಿದರು.

➢ ಶ್ರೀ.ಚಂದ್ರಪ್ಪ ರೆಡ್ಡಿ ರವರು ಮಾತನಾಡಿ ವಾರ್ಡ್‌ನಲ್ಲಿ ಸಮರ್ಪಕವಾಗಿ ನೀರಿನ ವ್ಯವಸ್ಥೆಯು ಪೂರೈಕೆ ಆಗುತ್ತಿರುವುದಿಲ್ಲ ಎಂದು ಸಭೆಗೆ ತಿಳಿಸಿದರು. ಇದಕ್ಕೆ ಬಿ.ಡಬ್ಲ್ಯೂ.ಎಸ್.ಎಸ್.ಬಿ ಸಹಾಯಕ ಅಭಿಯಂತರರು ಕ್ರಮ ವಹಿಸುವುದಾಗಿ ಸಭೆಗೆ ತಿಳಿಸಿದರು.

➢ ಶ್ರೀ.ಚಂದ್ರಪ್ಪ ರೆಡ್ಡಿ ರವರು ಮಾತನಾಡಿ ವಾರ್ಡ್‌ನಲ್ಲಿ ಬೆಸ್ಕಾಂ ವತಿಯಿಂದ ಅಲ್ಲಲ್ಲಿ ರಸ್ತೆ ಅಗೆತ ಆಗುತ್ತಿರುತ್ತದೆ. ಆದರೆ ಸಂಬಂದಪಟ್ಟ ಬೆಸ್ಕಾಂ ಅಧಿಕಾರಿಗಳು ಅಗೆದಿರುವ ರಸ್ತೆಗಳನ್ನು ಯಥಾಸ್ಥಿತಿಗೆ ತರುವುದಿಲ್ಲ ಎಂದು ಸಭೆಗೆ ತಿಳಿಸಿದರು. ಇದಕ್ಕೆ ಬೆಸ್ಕಾಂ ಸಹಾಯಕ ಅಭಿಯಂತರರು ಕ್ರಮ ವಹಿಸುವುದಾಗಿ ಸಭೆಗೆ ತಿಳಿಸಿದರು.

ಕಾರ್ಯದರ್ಶಿಗಳು
ವಾರ್ಡ್ ಸಮಿತಿ–113

ಅಧ್ಯಕ್ಷರು
ವಾರ್ಡ್ ಸಮಿತಿ, ವಾರ್ಡ್ 113
ಹಾಗೂ ನೋಡಲ್ ಅಧಿಕಾರಿಗಳು,
ವಾರ್ಡ್ 113